3. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಹಾಗೂ ಮಹಿಳಾ ಉದ್ಯಮಿಗಳಿಗೆ ಶೇ. 5ರಷ್ಟು ಹೆಚ್ಚುವರಿ ಸಹಾಯಧನ (ಗರಿಷ್ಟ ಮಿತಿ ರೂ.1 ಲಕ್ಷ).

4. ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ಹಾಗೂ ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆ ಅಭಿವೃದ್ಧಿ ನಿಗಮದ ವತಿಯಿಂದ ಕೈಗಾರಿಕ ಜಮೀನು ಅಥವಾ ಮಳಿಗೆಗಳ ಹಂಚಿಕೆ.

ಇದಲ್ಲದೆ ಪ್ರಧಾನಮಂತ್ರಿಗಳ ರೋಜಗಾರ ಯೋಜನೆಯಡಿ ವಿದ್ಯಾವಂತ ನಿರುದ್ಯೋಗಿ ಯುವಕ/ಯುವತಿಯರಿಗೆ ಕೈಗಾರಿಕೆ/ಸೇವೆ/ವ್ಯಾಪಾರ ಕ್ಷೇತ್ರದಲ್ಲಿ ಸ್ವಯಂ ಉದ್ಯೋಗ ಘಟಕಗಳನ್ನು ಸ್ಥಾಪಿಸಲು ವಾಣಿಜ್ಯ ಬ್ಯಾಂಕ್‌ಗಳಿಂದ ನೆರವು ನೀಡಲಾಗುತ್ತಿದೆ. ಸ್ಥಳೀಯರಲ್ಲಿ ಉದ್ಯಮಿಶೀಲತೆಯನ್ನು ಹೆಚ್ಚಿಸಲು ಒಂದು ವಾರದಿಂದ ಆರು ವಾರಗಳ ಅವಧಿಯ ವಿವಿಧ ಉದ್ಯಮಶೀಲದ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.

ಆ) ವಿರಾಜಪೇಟೆ ತಾಲ್ಲೂಕಿನಲ್ಲಿ 31.12.2004ರ ಅಂತ್ಯಕ್ಕೆ 841 ಸಣ್ಣ ಕೈಗಾರಿಕೆ ಘಟಕಗಳನ್ನು ಸ್ಥಾಪಿಸಲಾಗಿದೆ. ವಿರಾಜಪೇಟೆ ತಾಲ್ಲೂಕಿನಲ್ಲಿ ಮತ್ತು ಕೊಡಗು ಜಿಲ್ಲೆಯಲ್ಲಿ ಮಾನವ ಸಂಪನ್ಮೂಲಗಳ ಲಭ್ಯತೆಯ ಆಧಾರದ ಮೇಲೆ ಹೆಚ್ಚಿನ ಕೈಗಾರಿಕೆಗಳನ್ನು ಸ್ಥಾಪಿಸಲು ಇರುವ ಅವಕಾಶಗಳನ್ನು ಗುರುತಿಸಿ ಜಿಲ್ಲಾ ಮಟ್ಟದ ವರದಿಯನ್ನು ತಯಾರಿಸಿದೆ. ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಕೈಗಾರಿಕಾ ಬಂಡವಾಳ ಹೂಡಿಕೆ ವಿಚಾರ ಸಂಕೀರ್ಣ ಮತ್ತು ವಿಭಾಗೀಯ ಮಟ್ಟದಲ್ಲಿ ಮೈಸೂರಿನಲ್ಲಿ ಬಂಡವಾಳ ಹೂಡಿಕೆದಾರರ ಸಮಾವೇಶವನ್ನು ಆಯೋಜಿಸಲು ಕ್ರಮ ಕೈಗೊಳ್ಳಲಾಗಿದೆ.

ಇ) ವಿಭಾಗೀಯ ಬಂಡವಾಳ ಹೂಡಿಕೆದಾರರ ಸಮಾವೇಶವನ್ನು ಮೈಸೂರಿನಲ್ಲಿ ಫೆಬ್ರವರಿ/ಮಾರ್ಚ್ 2005ರಲ್ಲಿ ಆಯೋಜಿಸಲಾಗುವುದು. ಅದೇ ರೀತಿ ಜಿಲ್ಲಾ ಮಟ್ಟದ/ತಾಲ್ಲೂಕು ಮಟ್ಟದ ಉತ್ತೇಜನ ಕಾರ್ಯಕ್ರಮಗಳನ್ನು ಸಹ ಫೆಬ್ರವರಿ/ಮಾರ್ಚ್ ತಿಂಗಳುಗಳಲ್ಲಿ ನಡೆಸಲಾಗುವುದು. 15 ದಿನ ಅವಧಿಯ ಉದ್ಯಮಶೀಲತ ತರಬೇತಿ ಕಾರ್ಯಕ್ರಮವು ಸಹ ಫೆಬ್ರವರಿ 2005ರಲ್ಲಿ ಏರ್ಪಡಿಸಲಾಗಿದೆ.

ಈ) ವಿರಾಜಪೇಟೆ ತಾಲ್ಲೂಕಿನಲ್ಲಿ 10 ಎಕರೆ ಭೂ ಪ್ರದೇಶದಲ್ಲಿ ಒಂದು ಕೈಗಾರಿಕಾ ವಸಾಹತು ನಿರ್ಮಿಸಲು ಉದ್ದೇಶಿಸಿದೆ.

415(1095) : ಶ್ರೀ ಬಸವರಾಜ ಹೆಚ್ ಡಿ (ವಿರಾಜಪೇಟೆ) : ಮಾನ್ಯ ಪಶುಸಂಗೋಪನೆ ಮತ್ತು ವಕ್ಫ್ ಖಾತೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕೊಡಗು ಜಿಲ್ಲೆಯಲ್ಲಿರುವ ಚಿಕಿತ್ಸಾಲಯಗಳ ಸಂಖ್ಯೆ ಎಷ್ಟು(ತಾಲ್ಲೂಕುವಾರು ವಿವರ ನೀಡುವುದು)

ಆ) ಇವುಗಳನ್ನು ಮೇಲ್ದರ್ಜೆಗೇರಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ; ಯಾವ ಸ್ಥಳದ ಚಿಕಿತ್ಸಾಲಯಗಳನ್ನು ಮೇಲ್ದರ್ಜೆಗೇರಿಸಲಾಗುವುದು;

ಇ) ಹೊಸದಾಗಿ ಪ್ರಾರಂಭಿಸಲು ಉದ್ದೇಶಿಸಿರುವ ಸ್ಥಳಗಾಳವುವು ಇದರಲ್ಲಿ ವಿರಾಜಪೇಟೆ ತಾಲ್ಲೂಕಿನ ಯಾವ ಸ್ಥಳದಲ್ಲಿ ಪ್ರಾರಂಭಿಸಲು ಉದ್ದೇಶಿಸಲಾಗಿದೆ;

ಈ) ಸದರಿ ಆಸ್ಪತ್ರೆಗಳಲ್ಲಿ ಅಗತ್ಯಕ್ಕೆ ಅನುಗುಣವಾಗಿ ವೈದ್ಯರ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು (ತಾಲ್ಲೂಕುವಾರು ವಿವರ ನೀಡುವುದು)

ಉ) ಹಾಗಿದ್ದಲ್ಲಿ ಸದರಿ ಹುದ್ದೆಗಳ ನೇಮಕಕ್ಕೆ ಸರ್ಕಾರ ಯಾವ ಕ್ರಮ ಕೈಗೊಳ್ಳುವುದು; ಯಾವಾಗ ನೇಮಕ ಮಾಡಿಕೊಳ್ಳಲಾಗುತ್ತದೆ; ವಿವರ ನೀಡುವುದು ?

ಶ್ರೀ ಮಿರಾಜುದ್ದೀನ್. ಎನ್. ಪಟೇಲ್ (ಪಶುಸಂಗೋಪನೆ ಮತ್ತು ವಕ್ಫ್ ಖಾತೆ ಸಚಿವರು)

ಅ) ಒಟ್ಟಾರೆ ಕೊಡಗು ಜಿಲ್ಲೆಯಲ್ಲಿ 25 ಪಶು ಚಿಕಿತ್ಸಾಲಯಗಳು ಕಾರ್ಯನಿರ್ವಹಿಸುತ್ತಿವೆ. ಇವುಗಳ ತಾಲ್ಲೂಕುವಾರು ವಿವರ ಈ ಕೆಳಕಂಡಂತೆ ಇರುತ್ತದೆ.

ವಿವರ	ಮಡಿಕೇರಿ	ಸೋಮವಾರಪೇಟೆ	ವಿರಾಜಪೇಟೆ	ಒಟ್ಟು
ಪಶು ಚಿಕಿತ್ಸಾಲಯ	6	8	11	25

ಆ) ಪಶು ಚಿಕಿತ್ಸಾಲಯಗಳನ್ನು ಮೇಲ್ದರ್ಜೆಗೇರಿಸುವ ಕಾರ್ಯಕ್ರಮವಿರುವುದಿಲ್ಲ. ಉದ್ಭವಿಸುವುದಿಲ್ಲ.

ಇ) ಹೊಸ ಪಶುವೈದ್ಯಕೀಯ ಸಂಸ್ಥೆಗಳನ್ನು ಪ್ರಾರಂಭಿಸು ಕಾರ್ಯಕ್ರಮ ಇರುವುದಿಲ್ಲ ಉದ್ಭವಿಸುವುದಿಲ್ಲ.

ಈ) ಬಂದಿದೆ

ತಾಲ್ಲೂಕುವಾರು ಖಾಲಿ ಹುದ್ದೆಗಳ ವಿವರ ಈ ಕೆಳಕಂಡಂತೆ ಇದೆ.

ವಿವರ	ಮಡಿಕೇರಿ	ಸೋಮವಾರಪೇಟೆ	ವಿರಾಜಪೇಟೆ	ಒಟ್ಟು
ಪಶು ವೈದ್ಯಾಧಿಕಾರಿ	2	5	5	12
ಪಶು ವೈದ್ಯಕೀಯ ಪರೀಕ್ಷಕರು	9	6	11	26
ಪಶುವೈದ್ಯಕೀಯ ಸಹಾಯಕರು	1	–	–	1
ಡಿ ದರ್ಜೆ	5	3	13	21
ಒಟ್ಟು	17	14	29	60

ಉ) ರಾಜ್ಯದಲ್ಲಿ 250 ಪಶುವೈದ್ಯಾಧಿಕಾರಿಗಳ ಹುದ್ದೆಗಳನ್ನು ವಿಶೇಷ ನೇರ ನೇಮಕಾ ನಿಯಮದಡಿ ನೇಮಕಾತಿ ಮಾಡಿಕೊಳ್ಳುವ ಪ್ರಕ್ರಿಯೆ ಅಂತಿಮ ಹಂತದಲ್ಲಿ ಇದೆ. ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ 192 ಪಶುವೈದ್ಯಾಧಿಕಾರಿಗಳ ಸೇವೆಯನ್ನು ಸಕ್ರಮಗೊಳಿಸುವ ವಿಷಯ ಸರ್ಕಾರದ ಪರಿಶೀಲನೆಯಲ್ಲಿದೆ. ಪಶುವೈದ್ಯಕೀಯ ಪರೀಕ್ಷಕ ಹುದ್ದೆಗಳನ್ನು ಪಶುವೈದ್ಯಕೀಯ ಸಹಾಯಕರ ವೃಂದದಿಂದ ಮುಂಬಡ್ತಿ ಮೂಲಕ ಭರ್ತಿ ಮಾಡವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ, ಪಶುವೈದ್ಯಕೀಯ ಪರೀಕ್ಷೆ ಹುದ್ದೆಗಳನ್ನು ಡಿ ದರ್ಜೆಯ ಖಾಲಿ ಹುದ್ದೆಗಳನ್ನು ಅನುಕಂಪದ ಆಧಾರದ ಮೇಲೆ ಮತ್ತು ಇತರೆ ಇಲಾಖೆಗಳಿಂದ ಮರು ವಿನ್ಯಾಸ ಮೂಲಕ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.